**ಕರ್ನಾಟಕ ಸರ್ಕಾರ – ಅರಣ್ಯ ಇಲಾಖೆ**

**ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ (ಮುಖ್ಯಸ್ಥರು, ಅರಣ್ಯ ಪಡೆ) ಹಾಗೂ ಆಯ್ಕೆ ಪ್ರಾಧಿಕಾರ**

**ಇವರ ಕಚೇರಿ, ಅರಣ್ಯ ಭವನ, ಮಲ್ಲೇಶ್ವರಂ, ಬೆಂಗಳೂರು–560003**

# ಪ್ರಕಟಣೆ

**ಅಧಿಸೂಚನೆ ಸಂಖ್ಯೆ: ಬಿ9–ವಲಅ–ವಿವ–5/2014–15 ದಿನಾಂಕ 29–10–2014**

## ವಲಯ ಅರಣ್ಯಾಧಿಕಾರಿ ಹುದ್ದೆಗಳಿಗೆ ನೇರ ನೇಮಕಾತಿ

–0–

110 ವಲಯ ಅರಣ್ಯಾಧಿಕಾರಿ ಹುದ್ದೆಗಳಿಗೆ ಅಭ್ಯರ್ಥಿಗಳನ್ನು ಆಯ್ಕೆ ಮಾಡುವ ಸಂಬಂಧ ದಿನಾಂಕ 26–04–2015 ರಿಂದ ದಿನಾಂಕ 30–04–2015 ರವರೆಗೆ ಮುಖ್ಯ ಪರೀಕ್ಷೆಯು ಸರ್ಕಾರಿ ರಾಂ ನಾರಾಯಣ್ ಚೆಲ್ಲರಾಂ ವಾಣಿಜ್ಯ ಮತ್ತು ನಿರ್ವಹಣಾ ಕಾಲೇಜು, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು–560001 ಇಲ್ಲಿ ನಡೆಯುತ್ತದೆ. ಈಗಾಗಲೇ ಪೂರ್ವಭಾವಿ ಪರೀಕ್ಷೆಗೆ ನೀಡಲಾದ ಪ್ರವೇಶ ಪತ್ರವನ್ನೇ ಮುಖ್ಯ ಪರೀಕ್ಷೆಗಳಿಗೆ ಅಭ್ಯರ್ಥಿಗಳು ಹಾಜರುಪಡಿಸಲು ತಿಳಿಸಿದೆ. ಒಂದು ವೇಳೆ ಪ್ರವೇಶ ಪತ್ರ ಪ್ರಸ್ತುತ ಲಭ್ಯವಿಲ್ಲದೇ ಇದ್ದಲ್ಲಿ ಚುನಾವಣಾ ಫೋಟೋ ಗುರುತಿನ ಚೀಟಿ, ಆಧಾರ್ ಕಾರ್ಡ್, ಪಾಸ್‌ಪೋರ್ಟ್, ಚಾಲನಾ ಪರವಾನಗಿ ಪತ್ರ, ಪ್ಯಾನ್ ಕಾರ್ಡ್ ಇತ್ಯಾದಿ ಇವುಗಳಲ್ಲಿ ಯಾವುದಾದರೂ ಒಂದನ್ನು ಹಾಜರುಪಡಿಸಲು ತಿಳಿಸಿದೆ.

**ವಿಶೇಷ ಸೂಚನೆ:–** ಪರೀಕ್ಷಾ ಕೊಠಡಿಗೆ ಮೊಬೈಲ್ ಫೋನ್, ಪೇಜರ್, ಕ್ಯಾಲ್ಕ್ಯುಲೇಟರ್, ಗಣಕಯಂತ್ರ, ಪುಸ್ತಕ, ನೋಟ್ ಪುಸ್ತಕ, ಜ್ಯಾಮಿತಿ ಯಂತ್ರ ಪೆಟ್ಟಿಗೆ ಇತ್ಯಾದಿಗಳನ್ನು ತರಲು ನಿಷೇಧಿಸಿದೆ. ಯಾರಾದರು ಅಭ್ಯರ್ಥಿಗಳು ಇವುಗಳನ್ನು ಮುಚ್ಚುಮರೆಯಿಂದ ಪರೀಕ್ಷಾ ಕೊಠಡಿ ಒಳಗೆ ತಂದರೆ ಅಂತಹವರನ್ನು ಪರೀಕ್ಷಾ ಕೊಠಡಿಯಿಂದ ಹೊರಗೆ ಕಳುಹಿಸಲಾಗುವುದು ಹಾಗೂ ಪರೀಕ್ಷೆಯಲ್ಲಿ ಭಾಗವಹಿಸಲು ಅವಕಾಶ ನೀಡಲಾಗುವುದಿಲ್ಲ ಮತ್ತು 5 ವರ್ಷಗಳ ಕಾಲ ಅಂತಹ ಅಭ್ಯರ್ಥಿಗಳನ್ನು ಡಿಬಾರ್ ಮಾಡಲಾಗುವುದು.

ಬೆಂಗಳೂರು,
ದಿನಾಂಕ: 23–04–2015

ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ
(ಮುಖ್ಯಸ್ಥರು, ಅರಣ್ಯ ಪಡೆ)